# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ-181 ಹೊಸಕೆರೆಹಳ್ಳಿ, ಬೆಂಗಳೂರು

ಸಂ: ಸ.ಅ/ವಾ-161/2021-22

ದಿನಾಂಕ : 23-12-2021

## ವಾರ್ಡ್ ಸಮಿತಿಯ ಸಭೆಯ ನಡವಳಿಗಳು

**ವಿಷಯ:-** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ :ಬಿ12(58)ಪಿಆರ್/35/2020-21 ದಿನಾಕ :21-09-2020 ರವರ ಆದೇಶದಂತೆ ದಿನಾಂಕ :23-12-2021 ರಂದು ವಾರ್ಡ್ ಸಂಖ್ಯೆ-161 ಹೊಸಕೆರೆಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮತಿ ಸಭೆಯ ನಡುವಳಿಗಳು.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ವಾರ್ಡ್ ಕಮಿಟಿ ಸಭೆ ನಿಗಧಿಪಡಿಸಿ ದಿನಾಂಕ :23-12-2021 ರಂದು ವಾರ್ಡ್ ಕಛೇರಿಯಲ್ಲಿ ಬೆಳಿಗ್ಗೆ 10.30 ಗಂಟೆಗೆ ಶ್ರೀ ಧರಣೇಂದ್ರಕುಮಾರ್ ನೋಡೆಲ್ ಅಧಿಕಾರಿಗಳು ರವರ ಅಧ್ಯಕ್ಷತೆಯಲ್ಲಿ ಹಾಗೂ ಶ್ರೀ ವೆಂಕಟಮಲವಯ್ಯ.ಕೆ ಸದಸ್ಯ ಕಾರ್ಯದರ್ಶಿ ರವರ ಕಾರ್ಯಾಧ್ಯಕ್ಷತೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಡವಳಿಗಳು.

ಸಭೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರು ಹಾಜರಿರುತ್ತಾರೆ.

ಹಿಂದಿನ ವಾರ್ಡ್ ಸಭೆಯ ನಡವಳಿಗಳನ್ನು ಚರ್ಚಿಸಲಾಗಿರುತ್ತದೆ.

1) ನಂದನವನ ಉಧ್ಯಾನವನದಲ್ಲಿ ಬೋರ್‌ವೆಲ್ ಕೊರೆಯಲ್ಲಿ ಸಭೆಯಲ್ಲಿ ಸೂಚಿಸಿರುತ್ತಾರೆ.
2) ಹಾಳಾಗಿರುವ ಸಿ.ಡಿ ಗಳನ್ನು ಮರು ನಿರ್ಮಾಣ ಮಾಡಲು ಸಭೆಯಲ್ಲಿ ಸೂಚಿಸಿರುತ್ತಾರೆ..
3) ಹೊಸದಾಗಿ ಮತದಾರ ಪಟ್ಟಿಯಲ್ಲಿ ನೊಂದಣಿ ಮಾಡಬೇಕಾಗಿದ್ದಲ್ಲಿ ಸಾರ್ವಜನಿಕರಿಗೆ ಅರಿವು ಮೂಡಿಸುವಂತೆ ಸಭೆಯಲ್ಲಿ ಮಾನ್ಯ ಅಧ್ಯಕ್ಷರು ತಿಳಿಸಿರುತ್ತಾರೆ.
4) ನಂದನವನ ಉಧ್ಯಾನವನದಲ್ಲಿ ವ್ಯಾಯಮ ಸಾಮಾಗ್ರಿಗಳನ್ನು ಅಳವಡಿಸುವಂತೆ ಸಾರ್ವಜನಿಕರು ಸಭೆಯಲ್ಲಿ ತಿಳಿಸಿದರು.
5) ತೋಟಗಾರಿಕೆ ಅಧೀಕ್ಷಕರು ಮತ್ತು ಯೋಜನಾ ವಿಭಾಗದ ಕಾರ್ಯಪಾಲಕ ಅಭಿಯಂತರರು ಜಂಟಿಯಾಗಿ ಸಭೆ ನಡೆಸಿ ಅಭಿವೃದ್ಧಿ ಬಗ್ಗೆ ಚರ್ಚಿಸಿ ಕ್ರಮ ಕೈಗೊಳ್ಳುವಂತೆ ಮಾನ್ಯ ಅಧ್ಯಕ್ಷರು ಸಭೆಗೆ ತಿಳಿಸಿರುತ್ತಾರೆ.
6) ಹುಲಿಯಾರಮ್ಮ ದೇವಸ್ಥಾನದ ಪಕ್ಕದಲ್ಲಿರುವ ಬೋರ್‌ವೆಲ್ ಅನ್ನು ದುರಸ್ಥಿ ಪಡಿಸುವಂತೆ ಸಾರ್ವಜನಿಕರು ವಾರ್ಡ್ ಸಮಿತಿ ಸಭೆಗೆ ತಿಳಿಸಿರುತ್ತಾರೆ.
7) ಹೊಸದಾಗಿ ನಿರ್ಮಿಸಿರುವ ಸಮೂದಾಯ ಭವನದ ನಾಮಫಲಕವನ್ನು ಅಳವಡಿಸಿ ಕುಟುಂಬ ಕಲ್ಯಾಣ ಇಲಾಖೆ ವಶಕ್ಕೆ ನೀಡಲು ಸಭೆಯಲ್ಲಿ ಮಾನ್ಯ ಅಧ್ಯಕ್ಷರು ತಿಳಿಸಿರುತ್ತಾರೆ.

ಮಾನ್ಯ ಆಯುಕ್ತರವರ ಸೂಚನೆಯಂತೆ ಪ್ರತಿ ಒಂದನೇ ಹಾಗೂ ಮೂರನೇ ಶನಿವಾರದಂದು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲು ಹಾಗೂ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರಲು ಕೋರುತ್ತಾ ಮತ್ತು ಮುಂದಿನ ಸಭೆಯಲ್ಲಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಶನ್ ರವರನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಹ್ವಾನಿಸಲು ಸಂಚಾಲಕರಿಗೆ ಸೂಚಿಸಿ ಸಭೆಯಲ್ಲಿ ಯಾವುದೇ ಪ್ರಸ್ತಾವನೆ ಮಾಡದಿದ್ದ ಕಾರಣ ನೋಡಲ್ ಅಧಿಕಾರಿ/ಅಧ್ಯಕ್ಷರ ಅಪ್ಪಣೆ ಮೇರೆಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಾರ್ಡ್ ಸಮಿತಿ ಸಂಚಾಲಕರು

ವಾರ್ಡ್ 161 ರ ನೋಡಲ್ ಅಧಿಕಾರಿ.